Azadi Ka Amrit Mahotsav

ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು – 560001

ಸಂಖ್ಯೆ: ಇ-ಆಡಳಿತ ವರ್ಗಾವಣಾ ಕೋಶ-01/2022-23 ದಿನಾಂಕ: 08/02/2023

: ಜ್ಞಾಪನಾ :

ವಿಷಯ: 2022-23ನೇ ಸಾಲಿನ ಶಿಕ್ಷಕರ ವರ್ಗಾವಣೆ ಅರ್ಜಿಗಳ ಅಂಗೀಕಾರ ಹಾಗೂ ಪರಿಶೀಲನೆಗಾಗಿ ಸ್ಪಷ್ಟೀಕರಣ:

ಉಲ್ಲೇಖ: ಸಂಬಂಧಿಸಿದ ವರ್ಗಾವಣಾ ಪ್ರಾಧಿಕಾರಿಗಳು ಕೋರಿರುವ ಮನವಿಯಂತೆ .

---***---

ವಿಷಯದನ್ವಯ 2022-23ನೇ ಸಾಲಿನ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಗೆ ಈಗಾಗಲೇ ನೀಡಿರುವ ಅಧಿಸೂಚನೆಯಂತೆ, ಕ್ರಮವಹಿಸಲು ಸೂಚಿಸಲಾಗಿದೆ. ಆದಾಗ್ಯೂ ಕೆಲವು ವರ್ಗಾವಣಾ ಪ್ರಾಧಿಕಾರಿಗಳು ಕೆಲವು ಅಂಶಗಳ ಬಗ್ಗೆ ಮಾರ್ಗದರ್ಶನ ನೀಡುವಂತೆ ಕೋರಿರುತ್ತಾರೆ. ಸದರಿ ಮನವಿಗಳನ್ನು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣಾ ನಿಯಂತ್ರಣ) ಕಾಯ್ದೆ-2020 ಹಾಗೂ 2022ರ ತಿದ್ದುಪಡಿ ಕಾಯ್ದೆ ಹಾಗೂ ನಿಯಮಗಳನುಸಾರ ಈ ಕೆಳಗಿನಂತೆ ಸ್ಪಷ್ಟೀಕರಣ ನೀಡಿದೆ.

1. *ಪರಸ್ಪರ ವರ್ಗಾವಣೆ:* ಜ್ಯೇಷ್ಠತಾ ಘಟಕ/ ವಿಭಾಗದ ಹೊರಗೆ ಪರಸ್ಪರ ವರ್ಗಾವಣೆಗೆ ಒಟ್ಟು ಸೇವಾವಧಿಯಲ್ಲಿ ಆ ವೃಂದದಲ್ಲಿ ಕನಿಷ್ಟ 5 ವರ್ಷಗಳ ಸೇವೆ ಪೂರ್ಣಗೊಂಡಿರಬೇಕು ಹಾಗೂ ಕರ್ತವ್ಯನಿರತ ಸ್ಥಳದಲ್ಲಿ ಕನಿಷ್ಟ 3 ವರ್ಷಗಳ ಸೇವೆ ಪೂರ್ಣಗೊಂಡಿರುವ ಪ್ರಕರಣಗಳನ್ನು ಮಾತ್ರ ಪರಿಗಣಿಸುವುದು.
2. *ಆಧ್ಯತೆಗಳು:* ಸೇವಾವಧಿಯಲ್ಲಿ ಒಮ್ಮೆ ಮಾತ್ರ ಆಧ್ಯತೆಯನ್ನು ಕ್ಲೇಮ್ ಮಾಡಲು ಅವಕಾಶವಿದೆ ಎಂದು ಇರುತ್ತದೆ. ಇದನ್ನು ವರ್ಗಾವಣೆ ಕಾಯ್ದೆ-2020 ಜಾರಿಗೆ ಬಂದ ನಂತರ ಮಾತ್ರ ಅನ್ವಯವಾಗುವಂತೆ ಪರಿಗಣಿಸತಕ್ಕದ್ದು ಇದು ಕೋರಿಕೆ ವರ್ಗಾವಣೆಗೆ ಮಾತ್ರ ಅನ್ವಯವಾಗುತ್ತದೆ. ಆದರೆ ಹೆಚ್ಚುವರಿ ವರ್ಗಾವಣೆಗೆ ಅನ್ವಯವಾಗುವುದಿಲ್ಲ.
3. *ಪತಿ-ಪತ್ನಿ ಪ್ರಕರಣ:* ಹೆಚ್ಚುವರಿ ವರ್ಗಾವಣೆಯಲ್ಲಿ ಪತಿ-ಪತ್ನಿ ಇವರಲ್ಲಿ ಒಬ್ಬರು ಜಿಲ್ಲೆಯಿಂದ ಹೊರಗೆ ಕರ್ತವ್ಯ ನಿರ್ವಹಿಸುತ್ತಿದ್ದಲ್ಲಿ ಆಧ್ಯತೆಗೆ ಪರಿಗಣಿಸಲು ಅವಕಾಶವಿರುವುದಿಲ್ಲ. ಆದರೆ ಪತಿ-ಪತ್ನಿ ಇಬ್ಬರೂ ಒಂದೇ ತಾಲ್ಲೂಕಿನಲ್ಲಿ/ ಒಂದೇ ಜಿಲ್ಲೆಯ ಬೇರೆ ಬೇರೆ ತಾಲ್ಲೂಕಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಲ್ಲಿ ಅಂತಹವರಿಗೆ ಹೆಚ್ಚುವರಿಯಲ್ಲಿ ಆಧ್ಯತೆಗೆ ಪರಿಗಣಿಸುವುದು.
4. ಜಿ.ಪಿ.ಟಿ ಹಾಗೂ ಪಿ.ಎಸ್.ಟಿ ಶಿಕ್ಷಕರಿಗೆ ಅವರ ನೇಮಕಾತಿ ಆದೇಶದಲ್ಲಿ 5 ವರ್ಷ ಅಥವಾ 10 ವರ್ಷ ಅದೇ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುವ ಷರತ್ತು ವಿಧಿಸಿದ್ದಲ್ಲಿ ನೇಮಕಾತಿ ಆದೇಶದಲ್ಲಿರುವ ಷರತ್ತಿನನ್ವಯ ಪರಿಗಣಿಸಬೇಕು.
5. *ಸೇವಾ ಹಿರಿತನ:* ಶಿಕ್ಷಕರು ಒಂದೇ ದಿನ ಪೂರ್ವಾಹ್ನ ಅಥವಾ ಅಪರಾಹ್ನ ಕರ್ತವ್ಯಕ್ಕೆ ಹಾಜರಾಗಿದ್ದಲ್ಲಿ ಪೂರ್ವಾಹ್ನ ಅಥವಾ ಅಪರಾಹ್ನ ಎಂಬುದನ್ನು ಪರಿಗಣಿಸದೇ, ಕರ್ತವ್ಯಕ್ಕೆ ಹಾಜರಾದ ದಿನಾಂಕವನ್ನು ಮಾತ್ರ ಪರಿಗಣಿಸುವುದು, ಒಂದು ವೇಳೆ ಕರ್ತವ್ಯಕ್ಕೆ ಹಾಜರಾದ ದಿನಾಂಕ ಒಂದೇ ಆಗಿದ್ದಲ್ಲಿ ಅವರ ಜನ್ಮ ದಿನಾಂಕವನ್ನು ಪರಿಗಣಿಸಿ ಹೆಚ್ಚುವರಿ ಶಿಕ್ಷಕರನ್ನು ಗುರುತಿಸಲು ಕ್ರಮವಹಿಸುವುದು.

ಉಳಿದಂತೆ ಈಗಾಗಲೇ ನೀಡಿರುವ ಅಧಿಸೂಚನೆ ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ವರ್ಗಾವಣಾ ಕಾಯ್ದೆ / ನಿಯಮಗಳನ್ನು ಗಮನಿಸಿ ಅದರಂತೆ ಕ್ರಮವಹಿಸಲು ಸೂಚಿಸಿದೆ.

(ಡಾ॥ ವಿಶಾಲ್. ಆರ್) ಭಾ.ಆ.ಸೇ
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ.
ಬೆಂಗಳೂರು.

ಇವರಿಗೆ, ಅಗತ್ಯ ಕ್ರಮಕ್ಕಾಗಿ

1) ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರು ರವರುಗಳಿಗೆ
2) ಜಂಟಿ ನಿರ್ದೇಶಕರು (ಆಡಳಿತ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು
3) ಸಹ ನಿರ್ದೇಶಕರು, ಬೆಂಗಳೂರು/ಮೈಸೂರು/ಅಪರ ಆಯುಕ್ತರ ಕಛೇರಿ ಗುಲ್ಬರ್ಗಾ/ಧಾರವಾಡ

4) ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ಮೈಸೂರು /ಬೆಳಗಾವಿ/ಕಲ್ಬುರ್ಗಿ
5) ಸಾರ್ವಜನಿಕ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ)
6) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಉಪನಿರ್ದೇಶಕರು[ಆಡಳಿತ] ರವರ ಮೂಲಕ)

ಪ್ರತಿಯನ್ನು :-

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ) ಬಹುಮಹಡಿಗಳ ಕಟ್ಟಡ, ಬೆಂಗಳೂರು-1 ರವರ ಆದ್ಯ ಅವಗಾಹನೆಗಾಗಿ.
2. ಆಪ್ತ ಕಾರ್ಯದರ್ಶಿಯವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ .
3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ/ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ರಾಜ್ಯ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ ಮಾಹಿತಿಗಾಗಿ ಕಳುಹಿಸಿದೆ.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ/ಧಾರವಾಡ .
6. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು-01 ರವರಿಗೆ ಪ್ರತಿಯನ್ನು ರವಾನಿಸುತ್ತಾ, ಉದ್ದೇಶಿತ ವರ್ಗಾವಣೆ ಪ್ರಕ್ರಿಯೆಗೆ "ತಂತ್ರಾಂಶವನ್ನು" ನಿಯಮಗಳಡಿ ಸಜ್ಜುಗೊಳಿಸಿ ಯಾವುದೇ ಲೋಪಗಳು ಉದ್ಭವಿಸದಂತೆ, ಸೂಕ್ತ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.
7. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್)
8. ರಾಜ್ಯದ ಎಲ್ಲಾ ತಾಲ್ಲೂಕ್ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ.
9. ಇಲಾಖಾ ವೆಬ್-ಸೈಟ್‌ನಲ್ಲಿ ಪ್ರಕಟಣೆಗಾಗಿ ಇ-ಆಡಳಿತ ಶಾಖೆಗೆ.
10. ಕಛೇರಿ ಪ್ರತಿ.